Akashvani : Bangalore
Regional Bulletin In Kannada
20.09.2024 / 14.30 hrs

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
20.09.2024 / 14.30 hrs

<><*<><>*><>

ಮುಖ್ಯಾಂಶಗಳು

<><*<><>*><>

೧. ರೇಷ್ಮೆ ಬೆಳೆಗಾರರಿಗೆ ನೆರವಾಗಲು ಪ್ರತ್ಯೇಕ ಯೋಜನೆ ರೂಪಿಸುವಂತೆ ರಾಜ್ಯ ಸರ್ಕಾರಗಳಿಗೆ ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಸಲಹೆ

೨. ಕೆ.ಆರ್.ಪುರ ಸಮೀಪ ೨೨ ಎಕರೆ ೮ ಗುಂಟೆ ಜಮೀನು ಸ್ವಾಧೀನಕ್ಕೆ ಅಧಿಕಾರಿಗಳಿಗೆ ಸಚಿವ ಈಶ್ವರ ಬಿ. ಖಂಡ್ರೆ ಸೂಚನೆ

೩. ಎರಡು ದಿನಗಳ ಸಿಎಫ್‌ಟಿಆರ್‌ಐ ಆಹಾರ, ಸಿರಿಧಾನ್ಯ ತಂತ್ರಜ್ಞಾನ ಸಮ್ಮೇಳನಕ್ಕೆ ಚಾಲನೆ

೪. ದಾವಣಗೆರೆ ಗಣೇಶ ವಿಸರ್ಜನೆ ಕಲ್ಲು ತೂರಾಟ ಪ್ರಕರಣ; ೩೦ ಆರೋಪಿಗಳ ಬಂಧನ

೫. ಸಾಹಿತಿ ಹಂ.ಪ.ನಾಗರಾಜಯ್ಯ ಅವರಿಂದ ಈ ಬಾರಿಯ ವಿಶ್ವವಿಖ್ಯಾತ ನಾಡಹಬ್ಬ ದಸರಾ ಉದ್ಘಾಟನೆ

<><*<><>*><>

ರೇಷ್ಮೆ ಬೆಳೆಗಾರರಿಗೆ ನೆರವಾಗಲು ರಾಜ್ಯ ಸರ್ಕಾರಗಳು ಪ್ರತ್ಯೇಕ ಯೋಜನೆಗಳನ್ನು ತಯಾರಿಸಿ ಕೇಂದ್ರ ಸರ್ಕಾರಕ್ಕೆ ನೀಡಿದರೆ, ಪರಿಶೀಲಿಸಿ ಅನುಷ್ಠಾನಗೊಳಿಸಲಾಗುವುದು ಎಂದು ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ತಿಳಿಸಿದ್ದಾರೆ. ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ ಘಟಿಕೋತ್ಸವ ಭವನದಲ್ಲಿ ಏರ್ಪಡಿಸಿದ್ದ ಕೇಂದ್ರ ರೇಷ್ಮೆ ಮಂಡಳಿಯ ೭೫ ನೇ ವರ್ಷದ ಅಮೃತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ೧೯೧೨ ರಲ್ಲೇ ಮೈಸೂರಿನ ಮಹಾರಾಜರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು, ರೇಷ್ಮೆ ಬೆಳೆಗೆ ಉತ್ತೇಜನ ನೀಡಿದ್ದರು. ರೇಷ್ಮೆ ಸೀರೆ ಸೇರಿದಂತೆ ಇತರೆ ವಸ್ತುಗಳ ತಯಾರಿಕೆಗೆ ಪ್ರೋತ್ಸಾಹ ನೀಡಿದ್ದರು. ಇಂದಿಗೂ ಸಹ ಮೈಸೂರು ರೇಷ್ಮೆ ಸೀರೆಗೆ ಜಗತ್ತಿನಲ್ಲಿ ಹೆಚ್ಚಿನ ಬೇಡಿಕೆ ಇದೆ ಎಂದರು. ರೇಷ್ಮೆ ಬೆಳೆಗಾರರಿಗೆ ಕೇಂದ್ರ ಸರ್ಕಾರ ಎಲ್ಲಾ ನೆರವು ನೀಡಲು ಸಿದ್ಧವಿದೆ. ಉತ್ತಮ ಬೆಳೆ ಬೆಳೆಯುವ ರೈತರಿಗೆ ಯೋಜನೆಗಳನ್ನು ತಲುಪಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪಾತ್ರ ಬಹಳಷ್ಟಿದೆ. ಪ್ರತಿ ರಾಜ್ಯದ ಮಣ್ಣು ಮತ್ತು ಹವಾಮಾನಕ್ಕೆ ತಕ್ಕಂತೆ ಯೋಜನೆಗಳನ್ನು ರೂಪಿಸಿಕೊಟ್ಟರೆ, ಕೇಂದ್ರ

ಅನುಷ್ಠಾನಗೊಳಿಸಲು ಚಿಂತಿಸಲಿದೆ ಎಂದು ಹೇಳಿದರು. ೨೦೧೪ರ ವೇಳೆಯಲ್ಲಿ ಪ್ರತಿ ಕೆಜಿ ರೇಷ್ಮೆಗೆ ಕೇವಲ ೨೫೦ ರೂಪಾಯಿ ಇತ್ತು. ನಂತರ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಪ್ರತಿ ಕೆಜಿ ರೇಷ್ಮೆಗೆ ೪೦೦ರಿಂದ ೪೫೦ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ದೇಶದ ರೈತರು ೨ ಲಕ್ಷ ಎಕರೆ ಪ್ರದೇಶದಲ್ಲಿ ರೇಷ್ಮೆ ಬೆಳೆ ಬೆಳೆಯುತ್ತಿರುವುದು ಸ್ವಾಗತರ್ಹ ಎಂದು ತಿಳಿಸಿದರು. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮಾತನಾಡಿ, ದೇಶದ ೨೬ ರಾಜ್ಯಗಳ ರೈತರು ರೇಷ್ಮೆ ಕೃಷಿಯಲ್ಲಿ ತೊಡಗಿಕೊಂಡಿದ್ದಾರೆ. ಕಳೆದ ೧೫ ವರ್ಷಗಳಿಂದ ರೇಷ್ಮೆಗೆ ಉತ್ತಮ ಬೆಲೆ ಸಿಗುತ್ತಿರುವುದರಿಂದ ರೇಷ್ಮೆ ಬೆಳೆಗಾರರ ಆತ್ಮಹತ್ಯೆ ಪ್ರಕರಣ ಕಡಿಮೆಯಾಗಿದೆ ಎಂದು ಹೇಳಿದರು. ರೈತರು ಹೆಚ್ಚಾಗಿ ಉತ್ತಮ ರೇಷ್ಮೆ ಬೆಳೆ ಬೆಳೆಯುತ್ತಿರುವುದರಿಂದ ೨ ಸಾವಿರದ ೮೦೦ಕ್ಕೂ ಹೆಚ್ಚು ಟನ್ ಗಳಷ್ಟು ರೇಷ್ಮೆ ರಫ್ತು ಮಾಡಲಾಗುತ್ತಿದೆ. ರೇಷ್ಮೆ ಬೆಳೆಗಾರರ ಸಂಕಷ್ಟಗಳನ್ನು ಪರಿಹರಿಸಲು ಕೇಂದ್ರ ಸರ್ಕಾರ ಸಿದ್ಧವಿದೆ ಎಂದು ತಿಳಿಸಿದರು. ಆಧುನಿಕ ತಂತ್ರಜ್ಞಾನದಿಂದ ರೇಷ್ಮೆ ಬೆಳೆಗಾರರಿಗೆ ತೊಂದರೆ ಉಂಟಾಗುತ್ತಿದೆ. ರೇಷ್ಮೆ ಪ್ರತಿಷ್ಠಿತ ಬೆಳೆಯಾಗಿದ್ದು, ಕಷ್ಟದ ನಡುವೆಯೂ ರಾಜ್ಯದ ರೈತರು ರೇಷ್ಮೆ ಬೆಳೆ ಬೆಳೆಯುತ್ತಿದ್ದಾರೆ. ರೇಷ್ಮೆ ಬೆಳೆಗಾರರಿಗೆ ಕೇಂದ್ರ ಸರ್ಕಾರವು ಸಹಕಾರ ನೀಡಿ, ಉತ್ತೇಜನ ನೀಡಬೇಕಿದೆ ಎಂದು ರಾಜ್ಯ ರೇಷ್ಮೆ ಖಾತೆ ಸಚಿವ ಕೆ. ವೆಂಕಟೇಶ್ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಸಂಸದ ಡಾ. ಕೆ.ಸುಧಾಕರ್, ಶಾಸಕ ಜಿ.ಟಿ.ದೇವೇಗೌಡ ಉಪಸ್ಥಿತರಿದ್ದರು.

<><*<><>*><>

ಬೆಂಗಳೂರಿನ ಕೆ.ಆರ್.ಪುರ ಹೋಬಳಿ ಕೊತ್ತನೂರಿನ ಸರ್ವೆ ನಂ.೪೮ರಲ್ಲಿ ಅರಣ್ಯ ಇಲಾಖೆಗೆ ವಹಿಸಲಾದ ೨೨ ಎಕರೆ ೮ ಗುಂಟೆ ಜಮೀನಿನ ಮರು ಸ್ವಾಧೀನಕ್ಕೆ ಪ್ರಕ್ರಿಯೆ ಆರಂಭಿಸುವಂತೆ ಅಧಿಕಾರಿಗಳಿಗೆ ರಾಜ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಸೂಚನೆ ನೀಡಿದ್ದಾರೆ. ಬೆಂಗಳೂರು ನಗರದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ೧೯೯೯-೨೦೦೦ ಸಾಲಿನಲ್ಲಿ ಕೊತ್ತನೂರು ಗ್ರಾಮದ ಸರ್ವೆ ನಂ.೪೮ರಲ್ಲಿ ೨೨ ಎಕರೆ ೮ ಗುಂಟೆ ಜಮೀನಿನಲ್ಲಿ ನೆಡುತೋಪು ಅಭಿವೃದ್ಧಿಪಡಿಸಲು ಈ ಭೂಮಿಯನ್ನು ಅರಣ್ಯ ಇಲಾಖೆಗೆ ವಹಿಸಲಾಗಿತ್ತು. ಅರಣ್ಯ ಇಲಾಖೆಗೆ ಮಂಜೂರಾದ ೨೨ ಎಕರೆ ೮ ಗುಂಟೆ ಭೂಮಿಯ ಪೈಕಿ ೧೩ ಎಕರೆ ಜಮೀನನ್ನು ಅರಣ್ಯ ಇಲಾಖೆಗೆ ವಹಿಸಲಾಗಿದೆ ಎಂದು ಅಂದಿನ ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ಆದೇಶ ಪಹಣಿಯಲ್ಲಿ ನಮೂದಾಗಿದೆ. ಈ ಸುಮಾರು ೬೦೦ ಕೋಟಿ ರೂಪಾಯಿ ಬೆಲೆ ಬಾಳುವ ಒತ್ತುವರಿಯಾದ ಜಮೀನನ್ನು ಅರಣ್ಯ ಇಲಾಖೆಯ ವಶಕ್ಕೆ ಪಡೆಯಲು ೬೪(ಎ) ಅಡಿ ಪ್ರಕ್ರಿಯೆ ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚಿಸಿ ಸಚಿವರು ಟಿಪ್ಪಣಿಯನ್ನೂ ನೀಡಿದ್ದಾರೆ.

<><*<><>*><>

ಮೈಸೂರಿನಲ್ಲಿ ಕೇಂದ್ರಿಯ ಆಹಾರ ತಂತ್ರಜ್ಞಾನ ಮತ್ತು ಸಂಶೋಧನಾ ಸಂಸ್ಥೆ- ಅಈಖಿಖ। ವತಿಯಿಂದ ಆಯೋಜಿಸಿರುವ ಎರಡು ದಿನಗಳ ಆಹಾರ ಹಾಗೂ ಸಿರಿಧಾನ್ಯ ತಂತ್ರಜ್ಞಾನ ಪ್ರದರ್ಶನ ಸಮ್ಮೇಳನವನ್ನು ಕೇಂದ್ರಿಯ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ ನಿರ್ದೇಶಕ ಪ್ರೊಫೆಸರ್ ರಂಜನಾ ಅಗರ್‌ವಾಲ್ ಇಂದು ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಕೇಂದ್ರಿಯ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿಯು ದೇಶದ ಆರ್ಥಿಕತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದ್ದು, ವಿಜ್ಞಾನ ಮತ್ತು ಸಮಾಜದ ನಡುವೆ ಬಂಧ ಬೆಸೆಯುವ ಕೆಲಸ ಮಾಡುತ್ತಿದೆ.  ಗ್ರಾಮೀಣ ಭಾಗಗಳಲ್ಲಿ ಕಿರು ಉದ್ಯಮಗಳನ್ನು ಸ್ಥಾಪಿಸಿ, ಸುಸ್ಥಿರ ಗ್ರಾಮಗಳನ್ನು ನಿರ್ಮಿಸುವ ಕನಸನ್ನು ಹೊಂದಿದ್ದೇವೆ ಎಂದು ಹೇಳಿದರು. CFTRI ನ ನಿರ್ದೇಶಕಿ ಪ್ರೊಫೆಸರ್ ಶ್ರೀದೇವಿ ಅನ್ನಪೂರ್ಣ ಸಿಂಗ್ ಮಾತನಾಡಿ, ವಿಭಿನ್ನ ಆಹಾರ ಕ್ರಮಗಳನ್ನು ಸಮಾಜಕ್ಕೆ ಪರಿಚಯಿಸುವ ಕೆಲಸವನ್ನು  ಕೇಂದ್ರಿಯ ಆಹಾರ ತಂತ್ರಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಮಾಡುತ್ತಿದ್ದು,  ಆಹಾರ ವೈವಿಧ್ಯತೆ ಉಳಿಸಿಕೊಳ್ಳುವ ಸಂಶೋಧನೆಗಳನ್ನು ನಡೆಸಲಾಗುತ್ತಿದೆ ಎಂದು ಹೇಳಿದರು.  ಕಾರ್ಯಕ್ರಮದಲ್ಲಿ ಉನ್ನತ್ ಭಾರತ್ ಅಭಿಯಾನದ ರಾಷ್ಟ್ರೀಯ ಸಂಯೋಜಕ ಪ್ರೊ. ವೀರೇಂದ್ರ ರಾಜೀವ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

<><*<><>*><>

ದಾವಣಗೆರೆಯಲ್ಲಿ ನಿನ್ನೆ ನಡೆದ ಗಣೇಶ ವಿಸರ್ಜನಾ ಮೆರವಣಿಗೆ ಮೇಲೆ ಕಲ್ಲು ತೂರಾಟ ಪ್ರಕರಣ ಸಂಬಂಧ ೩೦  ಜನರನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ. ಕಳೆದ ರಾತ್ರಿ ನಗರದ ಬೇತೂರು ಗ್ರಾಮದಲ್ಲಿ ಗಣೇಶ ವಿಸರ್ಜನಾ ಮೆರವಣಿಗೆಯ ನಂತರ  ದಾವಣಗೆರೆ ನಗರ ಸಹಜ ಸ್ಥಿತಿಗೆ ಮರಳಿದ್ದು, ವ್ಯಾಪಾರ ವಹಿವಾಟು ಎಂದಿನಂತೆ ನಡೆದಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ನಾಡಹಬ್ಬ ದಸರಾವನ್ನು ಈ ಬಾರಿ ಸಾಹಿತಿ ಹಂ.ಪ. ನಾಗರಾಜಯ್ಯ ಉದ್ಘಾಟಿಸಲಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.  ಮೈಸೂರಿನ ವಿಮಾನ ನಿಲ್ದಾಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಂ.ಪ.ನಾಗರಾಜಯ್ಯ ಅವರಿಗೆ ದಸರಾ ಆಹ್ವಾನ ನೀಡಲಾಗಿದೆ ಎಂದರು. ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೆಷನರಿ ಅಧಿಕಾರಿಗಳ ನೇಮಕಕ್ಕೆ ನಡೆಯಲಿರುವ ಮರುಪರೀಕ್ಷೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಇದೇ ವೇಳೆ ಮಾಹಿತಿ ನೀಡಿದರು.  ದಾವಣಗೆರೆಯಲ್ಲಿ ಗಣೇಶ ಮೆರವಣಿಗೆ ವೇಳೆ ಉಂಟಾದ ಕಲ್ಲು ತೂರಾಟ ಸಂಬಂಧ ಅಗತ್ಯ ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸ್ ಇಲಾಖೆಗೆ ಸೂಚಿಸಲಾಗಿದೆ. ನಾಗಮಂಗಲ ಘಟನೆಯಲ್ಲಿ ಕರ್ತವ್ಯ ಲೋಪ ತೋರಿದ ಪೊಲೀಸ್ ಅಧಿಕಾರಿಯನ್ನು ಅಮಾನತು ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

<><*<><>*><>

ದಾವಣಗೆರೆ ವಿಶ್ವವಿದ್ಯಾಲಯ ಗಣಿತಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊಫೆಸರ್ ಬಿ.ಸಿ.ಪ್ರಸನ್ನಕುಮಾರ್ ಅವರು ರಾಜ್ಯಮಟ್ಟದ ಸರ್ ಸಿ.ವಿ.ರಾಮನ್ ಯುವ ವಿಜ್ಞಾನಿ ಪುರಸ್ಕಾರಕ್ಕೆ ಆಯ್ಕೆಯಾಗಿದ್ದಾರೆ. ರಾಜ್ಯ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ವಿಜ್ಞಾನಿಗಳು ಮತ್ತು ಎಂಜಿನಿಯರ್‌ಗಳಿಗಾಗಿ ನೀಡುವ ರಾಜ್ಯಮಟ್ಟದ ಪ್ರಶಸ್ತಿಯನ್ನು ೨೦೨೩ನೇ ಸಾಲಿಗಾಗಿ ಪ್ರೊಫೆಸರ್ ಪ್ರಸನ್ನಕುಮಾರ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಇಲಾಖೆಯ ಕಾರ್ಯದರ್ಶಿ ಡಾ.ಏಕ್‌ರೂಪ್ ಕೌರ್ ತಿಳಿಸಿದ್ದಾರೆ. ಇದೇ ೨೮ರಂದು ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ ಆವರಣದ ಜೆ.ಎನ್.ಟಾಟಾ ಸಭಾಭವನದಲ್ಲಿ ಏರ್ಪಡಿಸಿರುವ ಸಮಾರಂಭದಲ್ಲಿ ಪ್ರೊ.ಪ್ರಸನ್ನಕುಮಾರ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ರೈಲ್ವೆ ಇಲಾಖೆ ಹಿರಿಯ ಅಧಿಕಾರಿಗಳನ್ನು  ಕೋಲಾರ ಲೋಕಸಭಾ ಕ್ಷೇತ್ರದ ಸಂಸದ  ಮಲ್ಲೇಶ್ ಬಾಬು  ಭೇಟಿ ಮಾಡಿ, ಕೋಲಾರ ಜಿಲ್ಲೆಯ ರೈಲ್ವೆ ಅಭಿವೃದ್ಧಿ ಕಾಮಗಾರಿಗಳ ಕುರಿತು ಮನವಿ ಸಲ್ಲಿಸಿದರು. ಜಿಲ್ಲೆಯ ಹತ್ತಕ್ಕೂ ಹೆಚ್ಚು ರೈಲ್ವೇ ಗೇಟ್ ಅಭಿವೃದ್ಧಿ ಹಾಗೂ ಅಂಡರ್ ಪಾಸ್ ಮತ್ತು ಮೇಲ್ಸೇತುವೆ ನಿರ್ಮಾಣಕ್ಕೆ ಮನವಿ ಸಲ್ಲಿಸಿದ್ದಾರೆ. ಮಾಲೂರು ತಾಲೂಕಿನ ಮರಳಹಳ್ಳಿ ರೈಲ್ವೆ ನಿಲ್ದಾಣದಲ್ಲಿ ಫ್ಲಾಟ್‌ಫಾರಂ ನಿರ್ಮಾಣ ಹಾಗೂ ಕೋಲಾರ ನಗರದ ವಿಶ್ವೇಶ್ವರಯ್ಯ ಕ್ರೀಡಾಂಗಣದ ಸಮೀಪ ರೈಲು ನಿಲ್ದಾಣ ನಿರ್ಮಿಸುವಂತೆ ಇದೇ ವೇಳೆ ಅವರು ಮನವಿ ಸಲ್ಲಿಸಿದ್ದಾರೆ. ರೈಲ್ವೆ ಇಲಾಖೆಗೆ ಸಂಬಂಧಿಸಿದ ಕಾಮಗಾರಿಗಳ ಪರಿವೀಕ್ಷಣೆಗೆ ತಂಡ ರಚನೆ ಮಾಡಿ, ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವಂತೆ ಮನವಿ ಮಾಡಿದ್ದು, ಇದಕ್ಕೆ ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಸಂಸದ ಮಲ್ಲೇಶ ಬಾಬು ತಿಳಿಸಿದ್ದಾರೆ.

<><*<><>*><>

ರಾಯಚೂರು ನಗರದ ಸ್ವಚ್ಛತೆ ಕಾಪಾಡಿಕೊಳ್ಳುವಲ್ಲಿ ಹೆಚ್ಚಿನ ಜಾಗೃತಿ ಅವಶ್ಯಕತೆಯಿದ್ದು, ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ಆಡಳಿತ ಮಂಡಳಿ ಸೇರಿದಂತೆ ಸಾರ್ವಜನಿಕರ ಸಹಕಾರದಿಂದ ಸ್ವಚ್ಛತಾ ನಗರವನ್ನಾಗಿ ಮಾಡಲು ಸಾಧ್ಯ ಎಂದು ರಾಜ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಹೇಳಿದರು.  ರಾಯಚೂರು ನಗರದ ನೇತಾಜಿ ನಗರ ಶೆಟ್ಟಿಭಾವಿ ವೃತ್ತದಿಂದ ಸೂಪರ್ ಮಾರ್ಕೆಟ್‌ವರೆಗೆ ಜಿಲ್ಲಾಡಳಿತ ಹಾಗೂ ನಗರಸಭೆಯ ವತಿಯಿಂದ

ಹಮ್ಮಿಕೊಳ್ಳಲಾಗಿದ್ದ ಸ್ವಚ್ಛತಾ ಅಭಿಯಾನದ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

<><*<><>*><>

ಪ್ರತಿಯೊಬ್ಬ ವ್ಯಕ್ತಿಯು ತಮ್ಮ ಮನೆ ಹಾಗೂ ಗ್ರಾಮದ ಏಳಿಗೆಗಾಗಿ ಸ್ವಚ್ಛತೆಯನ್ನು ಕಾಪಾಡಿದರೆ ಮಾತ್ರ ಗ್ರಾಮದಲ್ಲಿ ಶುಚಿತ್ವದ ವಾತಾವರಣ ಇರಲಿದೆ ಎಂದು ಗದಗ ಜಿಲ್ಲೆಯ ಯಾವಗಲ್ಲ ಗ್ರಾಮ ಪಂಚಾಯತಿ ಅಧ್ಯಕ್ಷೆ ಲಲಿತಾ ರೋಣದ ತಿಳಿಸಿದರು. ಯಾವಗಲ್ ಗ್ರಾಮದಲ್ಲಿ ಜರುಗಿದ ಸ್ವಚ್ಚತಾ ಹೀ ಸೇವಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಗ್ರಾಮಸ್ಥರು ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>